ಆ) ಚನ್ನಪಟ್ಟಣ ಟೌನ್‌ನಲ್ಲಿ ಕಟ್ಟಡ ಖರೀದಿ ಬಗ್ಗೆ

ಚನ್ನಪಟ್ಟಣ ಕೋರ್ಟಿಯಲ್ಲಿ ಸರ್ಕಾರಿ ಮಾಡಲ್ ಪ್ರಾಥಮಿಕ ಶಾಲೆಗೆ ಒಂದು ಶಾಲಾ ಕಟ್ಟಡವನ್ನು ಕೊಂಡುಕೊಳ್ಳುವ ಪ್ರಸ್ತಾವನೆ ಇದೆ.

ಇ) ಚನ್ನಪಟ್ಟಣ ತಾಲ್ಲೂಕಿನಲ್ಲಿ ಶಾಲಾ ಕಟ್ಟಡ ಕಟ್ಟುವ ಬಗ್ಗೆ

ಕಪ್ಪು ಹಲಗೆ ಯೋಜನೆಯ ಅಡಿಯಲ್ಲಿ ತಾಲ್ಲೂಕಿನ ೮೮ ಗ್ರಾಮಗಳಲ್ಲಿ ಶಾಲಾ ಕಟ್ಟಡಗಳನ್ನು ಕಟ್ಟುವ ವಿಚಾರ ಒಳಗೊಂಡಿದೆ.

ಈ) ಚನ್ನಪಟ್ಟಣ ತಾಲ್ಲೂಕಿನಲ್ಲಿ ಶಾಲಾ ಕಟ್ಟಡ ಖರೀದಿ ಬಗ್ಗೆ ಯಾವುದೂ ಇಲ್ಲ.

ಮಾಗಡಿ ತಾಲ್ಲೂಕಿನ ಕುದೂರಿನಲ್ಲಿ ಜಿಲ್ಲಾ ಗ್ರಂಥಾಲಯವನ್ನು ಸ್ಥಾಪಿಸುವ ಬಗ್ಗೆ

೭೮೦ (೧೫೯೦) ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ) :- ಮಾನ್ಯ ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:—

ಅ) ಮಾಗಡಿ ತಾಲ್ಲೂಕಿನ ಕುದೂರಿನಲ್ಲಿ ಗ್ರಂಥಾಲಯವನ್ನು ಸ್ಥಾಪಿಸುವ ಬಗ್ಗೆ ಯಾವುದಾದರೂ ಪ್ರಸ್ತಾವನೆ ಇದೆಯೇ ?

ಆ) ಹಾಗಾದರೆ, ಜಿಲ್ಲಾ ಕೇಂದ್ರ ಗ್ರಂಥಾಲಯವನ್ನು ಸರ್ಕಾರವು ಯಾವಾಗ ಸ್ಥಾಪಿಸಲು ಮಂಜೂರಾತಿ ನೀಡಲಾಗುವುದು ?

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು).—

ಅ) ಮಂಡಲ ಗ್ರಂಥಾಲಯವನ್ನು ಪ್ರಾರಂಭಿಸಲಾಗಿದೆ.

ಆ) ಉದ್ಭವಿಸುವುದಿಲ್ಲ.

ಮಾಗಡಿ-ಕುದೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ವಿಜ್ಞಾನ ವಿಷಯವು ಇಲ್ಲದಿರುವ ಬಗ್ಗೆ

೭೮೧ (೧೫೭೬) ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ) :- ಮಾನ್ಯ ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ: —

ಅ) ಸರ್ಕಾರಿ ಪದವಿ ಪೂರ್ವ ಕಾಲೇಜು, ಕುದೂರು ಮಾಗಡಿ ತಾಲ್ಲೂಕು ಇಲ್ಲಿ ವಿಜ್ಞಾನ ವಿಷಯವು ಇಲ್ಲದಿರುವುದು ನಿಜವೇ ?

ಆ) ಹಾಗಿದ್ದಲ್ಲಿ ವಿಜ್ಞಾನ ವಿಷಯವನ್ನು ಪ್ರಾರಂಭಿಸುವಲ್ಲಿ ಸರ್ಕಾರವು ಎದುರಿಸುತ್ತಿರುವ ತೊಂದರೆಗಳೇನು ?

ಇ) ಈ ವರ್ಷದಿಂದಲೇ, ಸರ್ಕಾರವು ವಿಜ್ಞಾನ ವಿಷಯವನ್ನು ಪ್ರಾರಂಭಿಸುವುದೇ ?

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ, ಯುವಜನ ಸೇವೆ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು).—

ಅ) ಹೌದು.

ಆ) ರಾಜ್ಯದಲ್ಲಿ ಹೆಚ್ಚುವ ಹುದ್ದೆಗಳ, ಹೊಸ ಹುದ್ದೆಗಳ ಮತ್ತು ಐಚ್ಛಿಕ ವಿಷಯಗಳನ್ನು ಮಂಜೂರಾತಿ ಮಾಡಲು ಪ್ರಸ್ತಾವನೆ (ಕುದೂರು ಸರ್ಕಾರಿ ಕಿರಿಯ ಕಾಲೇಜಿನಲ್ಲಿ ವಿಜ್ಞಾನ ವಿಷಯವನ್ನು ತೆರೆಯುವುದು ಸೇರಿ) ಆಯುಕ್ತರಿಂದ ಸರ್ಕಾರಕ್ಕೆ ಬಂದಿದೆ. ಇದನ್ನು ಸರ್ಕಾರ ಪರಿಶೀಲಿಸುತ್ತಿದೆ.

ಇ) ಪರಿಶೀಲಿಸಲಾಗುವುದು.

ಮಾಗಡಿ ತಾಲ್ಲೂಕು ಕುದೂರಿಗೆ ರಂಗ ಮಂದಿರ ಮಂಜೂರು ಮಾಡುವ ಬಗ್ಗೆ

೭೮೨ (ಗಂಟೆ) ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ).—ಮಾನ್ಯ ಶಿಕ್ಷಣ, ಯುವಜನ ಸೇವಾ, ಕ್ರೀಡೆ, ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ:—

ಅ) ಮಾಗಡಿ ತಾಲ್ಲೂಕು ಕುದೂರಿನಲ್ಲಿ ರಂಗಮಂದಿರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಮಾಗಡಿ ತಾಲ್ಲೂಕು ಕುದೂರಿಗೆ ರಂಗಮಂದಿರವನ್ನು ಸರ್ಕಾರ ಮಂಜೂರು ಮಾಡುವುದೇ ?

ಇ) ಹಾಗಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು ?

ಶ್ರೀ ಕೆ ಹೆಚ್. ರಂಗನಾಥ್ (ಶಿಕ್ಷಣ, ಯುವಜನ ಸೇವಾ, ಕ್ರೀಡೆ ಕನ್ನಡ ಮತ್ತು ಸಂಸ್ಕೃತಿ ಸಚಿವರು).—

ಅ) ಇಲ್ಲ.

ಆ) ಸದ್ಯವ ನಿಯಮಾವಳಿಯ ಪ್ರಕಾರ ಕುದೂರಿಗೆ ಬಯಲು ರಂಗಮಂದಿರ ನಿರ್ಮಾಣಕ್ಕೆ ಮಂಜೂರಾತಿ ಕೊಡಲು ಅವಕಾಶ ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಕುದೂರು ಪಟ್ಟಣದಲ್ಲಿ ಕರ್ನಾಟಕ ಗೃಹ ಮಂಡಲಿಯು ಹುಡ್ಕೋ ಯೋಜನೆಯಡಿಯಲ್ಲಿ ವಸತಿ ಗೃಹಗಳನ್ನು ನಿರ್ಮಿಸುವ ಬಗ್ಗೆ

೭೮೩ (ಗಂಟೆ೭೭) ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ).—ಮಾನ್ಯ ಬಂದರು, ಮೀನುಗಾರಿಕೆ, ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ:—

ಅ) ಕರ್ನಾಟಕ ಗೃಹ ಮಂಡಳಿಯು ಹುಡ್ಕೋ ಯೋಜನೆಯಡಿಯಲ್ಲಿ ಕುದೂರು ಪಟ್ಟಣದಲ್ಲಿ ವಸತಿಗಳನ್ನು ನಿರ್ಮಿಸಿರುತ್ತಾರೆಯೇ ?

ಆ) ಹಾಗಿಲ್ಲದಿದ್ದಲ್ಲಿ ಇದರ ಬಗ್ಗೆ ಕಾರಣವೇನು ?

ಇ) ಸರ್ಕಾರ ಈ ಬಗ್ಗೆ ಕುದೂರಿನಲ್ಲಿ ವಸತಿಗಳನ್ನು ನಿರ್ಮಿಸಲು ಕರ್ನಾಟಕ ಗೃಹ ಮಂಡಳಿ ಮೂಲಕ ಕ್ರಮ ತೆಗೆದುಕೊಳ್ಳುವುದೇ ?